ಮಂಗಳವಾರ 13.01.2026
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 119
Digital Varthe Kannada Daily
Volume 01 - Issue 119
Tuesday 13.01.2026
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ
DIGITAL VARTHE
digitalvarthe@gmail.com
www.digitalvarthe.com

## ನಮ್ಮ ಸಂಸ್ಥೆ ಉತ್ತಮ ರೀತಿಯಲ್ಲಿ ನಡೆಯುತ್ತಿದೆ : ಸುನಾದ ಮಾಲಾ




**ಪೀಣ್ಯ ದಾಸರಹಳ್ಳಿ:** ನಮ್ಮ ಬೋಟಿಕ್ ಡಿಸೈನಿಂಗ್ ತರಬೇತಿ ಸಂಸ್ಥೆ ಬಗ್ಗೆ ಹಾಗೂ ನಮ್ಮ ಬಗ್ಗೆ ಅಪಪ್ರಚಾರ ಮಾಡುತ್ತಿದ್ದಾರೆ. ಅದು ಸುಳ್ಳು ನಾವು ಯಾವುದೇ ಮೋಸ, ವಂಚನೆ ಮಾಡುತ್ತಿಲ್ಲ' ಎಂದು ವಿದ್ಯಾರಣ್ಯಪುರದ ದೇವಾಂಶ ಡಿಸೈನಿಂಗ್ ಬೋಟಿಕ್ ಅಂಡ್ ರೆಂಟಲ್ ಹೌಸ್ ಮಾಲೀಕರಾದ ಸುನಾದ ಮಾಲಾ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಮೈಸೂರಿನಲ್ಲಿ ಸ್ವಲ್ಪ ಸಮಸ್ಯೆ ಆಗಿತ್ತು ಹಾಗಾಗಿ ಮೈಸೂರಿಗೆ ಹೋಗಿದ್ದೆ ಅದನ್ನೇ ನೆಪ ಮಾಡಿಕೊಂಡು ಹಿತ ಶತ್ರುಗಳು ನಮ್ಮ ಸಂಸ್ಥೆ ಮತ್ತು ನಮ್ಮ ಬಗ್ಗೆ ಇಲ್ಲಸಲ್ಲದ ಅಪಪ್ರಚಾರ ಮಾಡಿದ್ದಾರೆ. ಇದು ಸದ್ಯಕ್ಕೆ ದೂರವಾದ ಮಾತು' ಎಂದು ವಿವರಿಸಿದರು.

ಸುಮಾರು ವರ್ಷಗಳಿಂದ ನಾವು ಈ ಸಂಸ್ಥೆಯಲ್ಲಿ ತರಬೇತಿ ನೀಡುತ್ತಿದ್ದೇವೆ. ನಮ್ಮ ಈ ಏಳಿಗೆಯನ್ನು ಸಹಿಸದ ಕಿಡಿಗೇಡಿಗಳು ಹಣ ತೆಗೆದುಕೊಂಡು ಪರಾರಿಯಾಗಿದ್ದಾರೆ, ಸಂಸ್ಥೆ ಮುಚ್ಚಿದ್ದಾರೆ, ಹಲವರಿಗೆ ಮೋಸ ಮಾಡಿದ್ದಾರೆ! ಎಂದು ಅಪಪ್ರಚಾರ ಮಾಡಿದ್ದಾರೆ'
ನಾವು ಯಾರಿಗೂ ಮೋಸ ಮಾಡಿಲ್ಲ, ಈಗಲೂ ವಿದ್ಯಾರ್ಥಿನಿಯರು ತರಬೇತಿ ಪಡೆಯುತ್ತಿದ್ದಾರೆ. ಎಂದಿನಂತೆ ಸಂಸ್ಥೆ ಚಾಲನೆಯಲ್ಲಿದೆ. ಇಲ್ಲಸಲ್ಲದ ತಪ್ಪು ಮಾಹಿತಿ ನೀಡಿ ನಮ್ಮ ಸಂಸ್ಥೆ ವಿರುದ್ಧ ಎತ್ತಿ ಕಟ್ಟಿದ್ದಾರೆ. ವಿದ್ಯಾರ್ಥಿಗಳನ್ನು ದಾರಿ ತಪ್ಪಿಸುತ್ತಿದ್ದಾರೆ' ಎಂದು ಸುದ್ದಿಗೋಷ್ಠಿ ಯಲ್ಲಿ ಮಾಹಿತಿ ನೀಡಿದರು.

ವಿದ್ಯಾರ್ಥಿನಿ ಛಾಯಾ ಮಾತನಾಡಿ,' ನಾನು ಇಲ್ಲಿ ಬೋಟಿಕ್ ಡಿಸೈನಿಂಗ್ ತರಬೇತಿ ಪಡೆಯುತ್ತಿದ್ದೇನೆ. ನಮ್ಮ ಮೇಡಂ ಕೆಲವು ದಿನ ಮೈಸೂರಿಗೆ ಹೋಗಿದ್ದರು. ಆಗ ಕೆಲವರು ಬಂದು ನಿಮ್ಮ ಹಣ ಕೊಡುವುದಿಲ್ಲ? ಸಂಸ್ಥೆ ಮುಚ್ಚಿದ್ದಾರೆ,? ಇನ್ನೂ ತೆರೆಯುವುದಿಲ್ಲ ಎಂದು ನಮ್ಮನ್ನು ನಂಬಿಸಿ ಸಂಸ್ಥೆ ಬಗ್ಗೆ ಅಪಪ್ರಚಾರ ಮಾಡಿದರು. ಆದರೆ ಈಗ ಎಲ್ಲವೂ ಸರಿಯಾಗಿದೆ. ಮೇಡಂ ಎಲ್ಲೂ ಹೋಗಿಲ್ಲ ಇಲ್ಲೇ ಇದ್ದಾರೆ. ನಮಗೆ ತರಬೇತಿ ನೀಡುತ್ತಿದ್ದಾರೆ ನಮಗೆ ಯಾವುದೇ ರೀತಿ ಮೋಸವಾಗಿಲ್ಲ' ಎಂದು ಖಚಿತಪಡಿಸಿದರು.

ಹಳೆ ವಿದ್ಯಾರ್ಥಿನಿ ಅಕ್ಷತಾ ಮಾತನಾಡಿ,' ಇಲ್ಲಿ ಉತ್ತಮ ತರಬೇತಿ ಪಡೆದಿದ್ದೇನೆ. ಎಲ್ಲವೂ ಚೆನ್ನಾಗಿ ತರಬೇತಿ ನೀಡುತ್ತಾರೆ. ಆದರೆ ಕೆಲವರು ಬಿಟ್ಟು, ಏನಿದ್ದರೂ ಬಗೆಹರಿಸಿಕೊಳ್ಳ ಬಹುದಾಗಿತ್ತು. ಆದರೆ ಸಂಸ್ಥೆಯ ಬಗ್ಗೆ ಮಾಲೀಕರ ಬಗ್ಗೆ ಅಪಪ್ರಚಾರ ಮಾಡುವುದು ಸರಿಯಲ್ಲ' ಎಂದರು.

## ಮಹಿಳಾ ಟೆಕ್ಕಿ ನಿಗೂಢ ಸಾವು : ಪ್ರಕರಣಕ್ಕೆ ಬಿಗ್ ಟ್ವಿಸ್ಟ್







**ಬೆಂಗಳೂರು:** ರಾಮಮೂರ್ತಿ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದ ಮಂಗಳೂರಿನ ಟೆಕ್ಕಿ ಶರ್ಮಿಳಾ ಸಾವಿಗೆ ಬಿಗ್ ಟ್ವಿಸ್ಟ್ ಸಿಕ್ಕಿದೆ. ಶರ್ಮಿಳಾ ಶಾರ್ಟ್ ಸರ್ಕ್ಯೂಟ್ ನಿಂದ ಉಂಟಾದ ಬೆಂಕಿ ಅವಘಡದಲ್ಲಿ ಉಸಿರುಗಟ್ಟಿ ಸಾವನ್ನಪ್ಪಿಲ್ಲ. ಬದಲಾಗಿ ಪ್ರಿಯಕರನೇ ಕೊಲೆ ಮಾಡಿ ಬಳಿಕ ಸಾಕ್ಷ್ಯ ನಾಶ ಮಾಡಲು ಮನೆಗೆ ಬೆಂಕಿ ಇಟ್ಟಿದ್ದಾನೆ ಎನ್ನುವ ಸ್ಫೋಟಕ ಅಂಶ ಪೊಲೀಸ್ ತನಿಖೆಯಲ್ಲಿ ಬಯಲಿಗೆ ಬಂದಿದ್ದು, ಈ ಸಂಬಂಧ ಶರ್ಮಿಳಾ ಪ್ರಿಯಕರ ಕೇರಳ ಮೂಲದ ಕರ್ನಲ್ ಕುರೈ ಎನ್ನುವಾತನನ್ನು ಪೊಲೀಸರು ಬಂಧಿಸಿದ್ದಾರೆ.

ಬೆಂಗಳೂರಿನ ರಾಮಮೂರ್ತಿ ನಗರದ ಅಪಾರ್ಟ್‌ಮೆಂಟ್‌ನಲ್ಲಿ ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಕಾಣಿಸಿಕೊಂಡು, ದಟ್ಟ ಹೊಗೆ ಆವರಿಸಿದ್ದು, ಈ ದುರ್ಘಟನೆಯಲ್ಲಿ ಉಸಿರುಗಟ್ಟಿ ಮಂಗಳೂರು ಮೂಲದ 34 ವರ್ಷದ ಸಾಫ್ಟ್‌ವೇರ್ ಉದ್ಯೋಗಿ ಶರ್ಮಿಳಾ ಮೃತಪಟ್ಟಿದ್ದಾರೆ ಎನ್ನಲಾಗಿತ್ತು. ಈ ಸಂಬಂಧ ರಾಮಮೂರ್ತಿ ನಗರ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಿದಾಗ ಟೆಕ್ಕಿ ಶರ್ಮಿಳಾ ಸಾವಿನ ರಹಸ್ಯ ಕೊನೆಗೂ ಬಯಲಾಗಿದೆ.

ತನಿಖೆ ವೇಳೆ ಟೆಕ್ಕಿ ಶರ್ಮಿಳಾ ಕೊಲೆ ಎಂಬುದು ಬೆಳಕಿಗೆ ಬಂದಿದೆ. ಟೆಕ್ಕಿ ಶರ್ಮಿಳಾಳನ್ನ ಓನ್ ಸೈಡ್ ಲವ್ ಮಾಡ್ತಿದ್ದ, ಎದುರು ಮನೆಯ ಕೇರಳ ಮೂಲದ ಯುವಕ ಕರ್ನಲ್ ಕುರೈಕೊಲೆಗಾರ ಎಂದು ಬಯಲಾಗಿದೆ. ಈತನಿಗೆ ಇನ್ನೂ 18ವರ್ಷವಾಗಿದ್ದು, ಈತ ಕಾಲೇಜು ಓದುತ್ತಿದ್ದ. ಆದ್ರೆ, ತನ್ನ ವಯಸ್ಸಿಗಿಂತ ದೊಡ್ಡವಳಾಗಿದ್ದ 34 ವರ್ಷದ ಟೆಕ್ಕಿ ಶರ್ಮಿಳಾ ಮೇಲೆ ಲವ್ ಆಗಿದೆ. ಆದ್ರೆ, ಈ ವಿಚಾರವನ್ನು ಶರ್ಮಿಳಾಗೆ ಹೇಳಿರಲಿಲ್ಲ. ತಾನೇ ಮನಸ್ಸಲ್ಲಿ ಇಟ್ಟುಕೊಂಡು ಕೊನೆಗೆ ಆಕೆಯನ್ನು ಭೀಕರವಾಗಿ ಹತ್ಯೆಗೈದಿದ್ದಾನೆ.

**ಕೊಲೆ ಮಾಡಿದ್ದೇಗೆ:** ಬಂಧಿತ ಆರೋಪಿ ಕೇರಳ ಮೂಲದವನು ಎಂದು ತಿಳಿದುಬಂದಿದೆ. ಶರ್ಮಿಳಾ ಕಳೆದ ಎರಡು ವರ್ಷಗಳಿಂದ ಸುಬ್ರಹ್ಮಣ್ಯ ಲೇಔಟ್‌ನಲ್ಲಿ ವಾಸವಿದ್ದರು. ಇನ್ನು ಆರೋಪಿ ಕರ್ನಲ್ ಕುರೈ ಪಕ್ಕದ ಮನೆ ವಾಸಿಯಾಗಿದ್ದರಿಂದ ಮುಖ ಪರಿಚಯವಿದ್ದು, ಪ್ರತಿದಿನ ಇಬ್ಬರೂ ಮಾತನಾಡುತ್ತಿದ್ದು, ಇದರ ನಡುವೆ ಕುರೈಗೆ ಶರ್ಮಿಳನ ಮೇಲೆ ಲವ್ ಆಗಿದೆ. ಆದ್ರೆ, ಈ ಲವ್ ವಿಚಾರವನ್ನು ಶರ್ಮಿಳಾಗೆ ಹೇಳಿರಲಿಲ್ಲ. ಹೀಗೆ ಒಂದು ದಿನ ಅಂದರೆ ಜನವರಿ 3ರಂದು ಕರ್ನಲ್ ಕುರೈ, ಬಾಲ್ಕನಿ ಮೂಲಕ ಶರ್ಮಿಳಾಳ ಮನೆಯೊಳಗೆ ನುಗ್ಗಿದ್ದು, ಸಡನ್ ಆಗಿ ಹಿಂಬದಿಯಿಂದ ಶರ್ಮಿಳಾಳನ್ನ ಅಪ್ಪಿಕೊಂಡಿದ್ದ. ಆಗ ಶರ್ಮಿಳಾ ಕರ್ನಲ್ ಕುರೈನಿಂದ ಬಿಡಿಸಿಕೊಳ್ಳಲು ಯತ್ನಿಸಿದ್ದಾಳೆ. ಆ ವೇಳೆ ಕುರೈ, ಶರ್ಮಿಳಾಳ ಕುತ್ತಿಗೆ ಭಾಗಕ್ಕೆ ಬಲವಾಗಿ ಹೊಡೆದಿದ್ದು, ಇದರಿಂದ ಶರ್ಮಿಳಾ, ಪ್ರಜ್ಞೆ ತಪ್ಪಿ ಬಿದ್ದಿದ್ದಾಳೆ. ಬಳಿಕ ಶರ್ಮಿಳಾಳನ್ನ ಉಸಿರುಗಟ್ಟಿಸಿ ಕೊಲೆ ಮಾಡಿದ್ದಾನೆ.

ಅಲ್ಲದೇ ಸಾಕ್ಷಿ ನಾಶ ಮಾಡಲು ಮನೆಗೆ ಬೆಂಕಿ ಹಚ್ಚಿ ಪರಾರಿಯಾಗಿದ್ದ ಎನ್ನುವುದು ಪೊಲೀಸ್ ತನಿಖೆಯಲ್ಲಿ ಬಟಾಬಯಲಾಗಿದೆ.

**ಯಾರು ಈ ಶರ್ಮಿಳಾ:** ಮೃತ ಶರ್ಮಿಳಾ (34) ಅವರು ಮಂಗಳೂರಿನ ಕಾವೂರು ಮೂಲದವರು. ಕಳೆದ ಒಂದೂವರೆ ವರ್ಷಗಳಿಂದ ಬೆಂಗಳೂರಿನ ರಾಮಮೂರ್ತಿ ನಗರದ ಸುಬ್ರಹ್ಮಣ್ಯ ಲೇಔಟ್‌ನ ಅಪಾರ್ಟ್‌ಮೆಂಟ್‌ನಲ್ಲಿ ಸ್ನೇಹಿತೆಯೊಂದಿಗೆ ವಾಸವಾಗಿದ್ದರು. ಮನೆ ಸಮೀಪದ ಖಾಸಗಿ ಸಾಫ್ಟ್‌ವೇರ್ ಕಂಪನಿಯಲ್ಲಿ ಟೆಕ್ಕಿಯಾಗಿ ಕೆಲಸ ಮಾಡುತ್ತಿದ್ದರು. ಘಟನೆ ನಡೆದ ದಿನ ಶರ್ಮಿಳಾಗೆ ರಜೆ ಇದ್ದು, ಆಕೆಯ ಸ್ನೇಹಿತೆ ಊರಿಗೆ ತೆರಳಿದ್ದ ಕಾರಣ ಶರ್ಮಿಳಾ ಮನೆಯಲ್ಲಿ ಒಬ್ಬರೇ ಇದ್ದರು. ಇದನ್ನೇ ಗಮನಿಸಿ ಕರ್ನಲ್ ಮನೆಯೊಳಗೆ ನುಗ್ಗಿ ಈ ರೀತಿ ಕೃತ್ಯ ಎಸಗಿದ್ದಾನೆ.

**ಹೊಗೆಯಿಂದ ಉಸಿರುಟ್ಟಿ ಸಾವು ಎನ್ನಲಾಗಿತ್ತು:** ಜನವರಿ 3ರಂದು ರಾತ್ರಿ ಸುಮಾರು 11 ಗಂಟೆ ಸುಮಾರಿಗೆ ಮನೆಯ ಒಂದು ಕೋಣೆಯಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಂಡು ದಟ್ಟವಾದ ಹೊಗೆ ಆವರಿಸಿತ್ತು. ಬೆಂಕಿ ಕಾಣಿಸಿಕೊಂಡ ಕೂಡಲೇ ಶರ್ಮಿಳಾ ಆ ಕೋಣೆಯತ್ತ ತೆರಳಲು ಯತ್ನಿಸಿದ್ದಾರೆ. ಇದೇ ವೇಳೆ ವಿದ್ಯುತ್ ಸಂಪರ್ಕ ಕಡಿತಗೊಂಡ ಪರಿಣಾಮ ಮನೆ ಸಂಪೂರ್ಣ ಕತ್ತಲಲ್ಲಿ ಮುಳುಗಿದೆ. ಕತ್ತಲೆ ಮತ್ತು ದಟ್ಟ ಹೊಗೆಯಿಂದಾಗಿ ಕಿಟಕಿ ಅಥವಾ ಬಾಗಿಲು ತೆರೆಯಲು ಸಾಧ್ಯವಾಗದೆ, ಶರ್ಮಿಳಾ ಉಸಿರುಗಟ್ಟಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂಬ ಪ್ರಾಥಮಿಕ ಮಾಹಿತಿ ಹೊರಬಿದ್ದಿತ್ತು. ಸ್ಥಳೀಯರು ನೀಡಿದ ಮಾಹಿತಿ ಮೇರೆಗೆ ಅಗ್ನಿಶಾಮಕ ದಳ ಹಾಗೂ ಪೊಲೀಸರು ಸ್ಥಳಕ್ಕೆ ಧಾವಿಸಿ ಬೆಂಕಿ ನಂದಿಸಿದ್ದರು. ನಂತರ ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿತ್ತು.

## ಮಹಿಳೆ ಮೇಲೆ ಸಾಮೂಹಿಕ ಅತ್ಯಾಚಾರ





**ಹುಬ್ಬಳ್ಳಿ:** ಮಹಿಳೆಗೆ ಮದ್ಯ ಕುಡಿಸಿ ಆಕೆಯ ಮೇಲೆ ಗ್ಯಾಂಗ್ ರೇಪ್ ಮಾಡಿರುವ ಘಟನೆ ಹುಬ್ಬಳ್ಳಿಯಲ್ಲಿ ನಡೆದಿದೆ. ಹಳೇ ಹುಬ್ಬಳ್ಳಿ ಪೊಲೀಸ್ ಠಾಣೆಗೆ ಸಂತ್ರಸ್ತೆ ನೀಡಿದ್ದ ದೂರಿನ ಆಧಾರದಲ್ಲಿ ಇಬ್ಬರು ಆರೋಪಿಗಳನ್ನು ಅರೆಸ್ಟ್ ಮಾಡಲಾಗಿದೆ. ಕಾಮುಕರು ಕೃತ್ಯದ ವಿಡಿಯೋ ಕೂಡ ಮಾಡಿಕೊಂಡು ಅದನ್ನು ಹರಿಬಿಟ್ಟಿದ್ದರು ಎನ್ನಲಾಗಿದೆ. ಇನ್ನು ಸಂತ್ರಸ್ತೆಗೆ ಅಗತ್ಯ ಚಿಕಿತ್ಸೆಯನ್ನು ನೀಡಲಾಗ್ತಿದೆ.

ಘಟನೆ ಬಗ್ಗೆ ಪೊಲೀಸ್ ಕಮಿಷನರ್ ಎನ್.ಶಶಿಕುಮಾರ್ ಪ್ರತಿಕ್ರಿಯಿಸಿದ್ದು, ಜ.9ರಂದು ಅಂಬೇಡ್ಕರ್ ಮೈದಾನದಿಂದ ಇಬ್ಬರು ಯುವಕರು ಆಟೋದಲ್ಲಿ ಮಹಿಳೆಯನ್ನು ಕರೆದೊಯ್ದಿದ್ದರು. ಮದ್ಯ ಕುಡಿಸಿ ಅನುಚಿತವಾಗಿ ವರ್ತಿಸಿ ವಿಡಿಯೋ ಮಾಡಿಕೊಂಡಿದ್ದಾರೆ. ಒಂದು ದಿನದ ನಂತರ ಮಹಿಳೆ ಠಾಣೆಗೆ ಬಂದು ಅತ್ಯಾಚಾರ ಮಾಡಿ ವಿಡಿಯೋ ಮಾಡಿ ಹರಿಬಿಟ್ಟ ಬಗ್ಗೆ ದೂರು ನೀಡಿದ್ದಾಳೆ. ಪ್ರಕರಣ ಸಂಬಂಧ ಆರೋಪಿಗಳಾದ ಶಿವಾನಂದ, ಗಣೇಶ್‌ಗೆ ಸ್ಥಳೀಯರು ಥಳಿಸಿದ್ದಾರೆ. ಕಟ್ಟಿಹಾಕಿ ತಲೆ ಬೋಳಿಸಿದ್ದಾರೆ. ಹಲ್ಲೆ ಸಂಬಂಧ ನಾಲ್ವರ ವಿರುದ್ಧ ದೂರು ದಾಖಲಾಗಿದೆ ಎಂದು ತಿಳಿಸಿದ್ದಾರೆ.

ಆರೋಪಿಗೆ ಥಳಿಸಿದವರ ಮೇಲೆ ಕೇಸ್‌ಗೆ ಖಂಡನೆ
ಮಹಿಳೆಯ ಮೇಲೆ ಸಾಮೂಹಿಕ ಅತ್ಯಾಚಾರ ನಡೆಸಿದ ಆರೋಪಿಗಳನ್ನು ಥಳಿಸಿ ಪೊಲೀಸರಿಗೆ ಒಪ್ಪಿಸಿದ್ದ ನಾಲ್ವರ ವಿರುದ್ಧ ದೂರು ದಾಖಲಾಗಿರೋದು ಭಾರಿ ಆಕ್ರೋಶಕ್ಕೆ ಕಾರಣವಾಗಿದೆ. ಹುಬ್ಬಳ್ಳಿ ನಗರದ ಶಿವಶಂಕರ ಕಾಲೋನಿಯ ನಾಲ್ವರ ವಿರುದ್ಧ ಪ್ರಕರಣ ಖಂಡಿಸಿ ಹಳೇ ಹುಬ್ಬಳ್ಳಿ ಪೊಲೀಸ್ ಠಾಣೆ ಬಳಿ ಸ್ಥಳೀಯರು ಕಿಡಿ ಕಾರಿದ್ದಾರೆ. ಆರೋಪಿಗಳನ್ನು ಹಿಡಿದು ಕೊಟ್ಟವರ ವಿರುದ್ಧ ಕೇಸ್ ಹಾಕಲಾಗಿದ್ದು, ಕೂಡಲೇ ಅವರನ್ನು ಬಿಡುಗಡೆ ಮಾಡಬೇಕೆಂದು ಆಗ್ರಹಿಸಿದ್ದಾರೆ.

## SSLC ಪೂರ್ವಸಿದ್ಧತಾ ಪ್ರಶ್ನೆ ಪತ್ರಿಕೆ ಸೋರಿಕೆ: ಶಿಕ್ಷಕರು ಸೇರಿ 8 ಆರೋಪಿಗಳು ಅರೆಸ್ಟ್




**ಬೆಂಗಳೂರು:** ರಾಜ್ಯಾದ್ಯಂತ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಭವಿಷ್ಯ ನಿರ್ಧರಿಸುವ ಪೂರ್ವಸಿದ್ಧತಾ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ, ಪರೀಕ್ಷೆಗಿಂತ ಮುಂಚೆಯೇ ಪ್ರಶ್ನೆ ಪತ್ರಿಕೆಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡಿದ್ದ ಗಂಭೀರ ಆರೋಪದ ಮೇಲೆ ಉತ್ತರ ವಿಭಾಗದ ಸೈಬರ್ ಕ್ರೈಂ ಪೊಲೀಸರು ಭರ್ಜರಿ ಕಾರ್ಯಾಚರಣೆ ನಡೆಸಿ, ಒಟ್ಟು ಎಂಟು ಜನರನ್ನು ಬಂಧಿಸಿದ್ದಾರೆ.

**ಬಂಧಿತರಲ್ಲಿ ಶಿಕ್ಷಕರು ಮತ್ತು ಮುಖ್ಯೋಪಾಧ್ಯಾಯರು:** ವಿದ್ಯಾರ್ಥಿಗಳಿಗೆ ದಾರಿದೀಪವಾಗಬೇಕಿದ್ದ ಶಿಕ್ಷಕರು ಮತ್ತು ಶಾಲಾ ಮುಖ್ಯಸ್ಥರೇ ಈ ಕಾನೂನುಬಾಹಿರ ಕೃತ್ಯದಲ್ಲಿ ನೇರವಾಗಿ ಭಾಗಿಯಾಗಿದ್ದಾರೆ. ಬಂಧಿತ ಎಂಟು ಜನರಲ್ಲಿ ಆರು ಮಂದಿ ಶಿಕ್ಷಣ ಕ್ಷೇತ್ರದವರಾಗಿದ್ದರೆ, ಇಬ್ಬರು ಅಪ್ರಾಪ್ತ ವಿದ್ಯಾರ್ಥಿಗಳಾಗಿದ್ದಾರೆ. ಈ ಪ್ರಕರಣದಲ್ಲಿ ಗಿರೀಶ್ ವಿ.ಡಿ: ಮುಖ್ಯೋಪಾಧ್ಯಾಯರು-ತುಮಕೂರು, ಅಮ್ಜದ್ ಖಾನ್: ಸಹ ಶಿಕ್ಷಕರು-ರಾಮನಗರ, ಶಾಹಿದಾ ಬೇಗಂ: ಮುಖ್ಯ ಶಿಕ್ಷಕಿ-ಕಲಬುರಗಿ, ಫಾಹ್ಮಿದಾ: ಸಹ ಶಿಕ್ಷಕಿ-ಕಲಬುರಗಿ, ಮೊಹಮ್ಮದ್ ಸಿರಾಜುದ್ದೀನ್: ಶಿಕ್ಷಕರು-ಕಲಬುರಗಿ, ಫರ್ಜಾನಾ ಬೇಗಂ: ಶಿಕ್ಷಕಿ-ಕಲಬುರಗಿ ಬಂಧಿತ ಆರೋಪಿಗಳಾಗಿದ್ದಾರೆ.

ಬಂಧಿತ ಆರೋಪಿಗಳಲ್ಲಿ ಬಹುತೇಕರು ಕಲಬುರಗಿ ಮೂಲದವರಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಪರೀಕ್ಷಾ ಪಾವಿತ್ರ್ಯತೆಯನ್ನು ಕಾಪಾಡಬೇಕಾದ ಜವಾಬ್ದಾರಿಯುತ ಸ್ಥಾನದಲ್ಲಿದ್ದ ಶಿಕ್ಷಕರೇ ಪ್ರಶ್ನೆ ಪತ್ರಿಕೆಯನ್ನು ಮೊಬೈಲ್ ಮೂಲಕ ಹಂಚಿಕೊಂಡಿದ್ದರು ಎಂಬುದು ತನಿಖೆಯಲ್ಲಿ ತಿಳಿದುಬಂದಿದೆ.

**ವೈರಲ್ ಆಗಿದ್ದು ಹೇಗೆ? :** ಆರೋಪಿಗಳು ಇನ್‌ಸ್ಟಾಗ್ರಾಂ (Instagram) ಮತ್ತು ಟೆಲಿಗ್ರಾಂ ಅಪ್ಲಿಕೇಶನ್‌ಗಳನ್ನು ಈ ಕೃತ್ಯಕ್ಕಾಗಿ ಬಳಸಿಕೊಂಡಿದ್ದಾರೆ. ಪ್ರಶ್ನೆ ಪತ್ರಿಕೆಯ ಫೋಟೋಗಳನ್ನು ತೆಗೆದು ಈ ಆಪ್‌ಗಳಲ್ಲಿರುವ ವಿವಿಧ ಗುಂಪುಗಳಿಗೆ ಹರಿಯಬಿಡಲಾಗಿತ್ತು. ಸೈಬರ್ ಕ್ರೈಂ ಪೊಲೀಸರು ತಾಂತ್ರಿಕ ತಂಡದ ನೆರವಿನೊಂದಿಗೆ ಈ ವೈರಲ್ ಸಂದೇಶಗಳ ಮೂಲವನ್ನು ಪತ್ತೆ ಹಚ್ಚುವಾಗ ಈ ಶಿಕ್ಷಕರ ಜಾಲ ಪತ್ತೆಯಾಗಿದೆ. ಇಬ್ಬರು ಅಪ್ರಾಪ್ತ ವಿದ್ಯಾರ್ಥಿಗಳು ಕೂಡ ಪರೀಕ್ಷೆಯ ಅಂಕಗಳ ಲಾಭಕ್ಕಾಗಿ ಇವುಗಳನ್ನು ವೈರಲ್ ಮಾಡಿದ್ದರು ಎನ್ನಲಾಗಿದ್ದು, ಅವರನ್ನು ಕೂಡ ವಶಕ್ಕೆ ಪಡೆಯಲಾಗಿದೆ.

**ಪೊಲೀಸ್ ತನಿಖೆ ತೀವ್ರ:** ಬಂಧಿತರ ಬಳಿಯಿದ್ದ ಮೊಬೈಲ್ ಫೋನ್‌ಗಳನ್ನು ವಶಪಡಿಸಿಕೊಂಡಿರುವ ಪೊಲೀಸರು, ಡಿಜಿಟಲ್ ಪುರಾವೆಗಳಿಗಾಗಿ ಫೋರೆನ್ಸಿಕ್ ತನಿಖೆಗೆ ಕಳುಹಿಸಿದ್ದಾರೆ. ಯಾರಿಂದ ಯಾರಿಗೆ ಮೊದಲು ಪತ್ರಿಕೆ ತಲುಪಿತು ? ಇದರ ಹಿಂದೆ ಹಣದ ವ್ಯವಹಾರ ನಡೆದಿದೆಯೇ ? ಅಥವಾ ಖಾಸಗಿ ಟ್ಯೂಷನ್ ಮಾಫಿಯಾ ಕೈವಾಡವಿದೆಯೇ ? ಎಂಬ ಆಯಾಮಗಳಲ್ಲಿ ವಿಚಾರಣೆ ನಡೆಯುತ್ತಿದೆ.

ಈ ಪ್ರಕರಣವು ಶಿಕ್ಷಣ ಇಲಾಖೆಗೆ ಮುಜುಗರ ತಂದಿದ್ದು, ಮುಂದೆ ನಡೆಯಲಿರುವ ವಾರ್ಷಿಕ ಪರೀಕ್ಷೆಗಳಿಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ.

## ಸಂಘಟನೆ ಬಲವರ್ಧನೆಗೆ ಚರ್ಚೆ:
### ಮಾದಾರ ಮಹಾಸಭಾ ಮಂಡ್ಯ ಜಿಲ್ಲಾ-ತಾಲ್ಲೂಕು ಸಭೆ



**ಕೃಷ್ಣರಾಜಪೇಟೆ** ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕರ್ನಾಟಕ ರಾಜ್ಯ ಮಾದಾರ ಮಹಾಸಭಾ ಮಂಡ್ಯ ಜಿಲ್ಲಾ ಘಟಕ ಹಾಗೂ ಕೃಷ್ಣರಾಜಪೇಟೆ ತಾಲ್ಲೂಕು ಘಟಕದ ಪದಾಧಿಕಾರಿಗಳ ಸಭೆಯು ಮಹಾಸಭಾ ರಾಜ್ಯ ಕಾರ್ಯಕಾರಿಣಿ ಸದಸ್ಯರಾದ ಎನ್.ಆರ್. ಚಂದ್ರಶೇಖರ್ ಹಾಗೂ ಮಂಡ್ಯ ಜಿಲ್ಲಾ ಘಟಕದ ಅಧ್ಯಕ್ಷ ಬಿ.ಬಿ.ಕಾವಲು ಕಾಂತರಾಜು, ತಾಲ್ಲೂಕು ಘಟಕದ ಅಧ್ಯಕ್ಷ ಆರ್.ಟಿ.ಉಮೇಶ್ ನೇತೃತ್ವದಲ್ಲಿ ನಡೆಯಿತು.

ಸಭೆಯಲ್ಲಿ ಮಾತನಾಡಿದ ಮಾದಾರ ಮಹಾಸಭಾ ರಾಜ್ಯ ಸಮಿತಿ ಸದಸ್ಯ ಎನ್.ಆರ್. ಚಂದ್ರಶೇಖರ್ ಮಾತನಾಡಿ ಕರ್ನಾಟಕ ರಾಜ್ಯ ಮಾದಾರ ಮಹಾಸಭಾ ರಾಜ್ಯದಲ್ಲಿ ಪರಿಶಿಷ್ಟ ಜಾತಿಯಲ್ಲಿ ನಂ.1 ಸ್ಥಾನದಲ್ಲಿರುವ ಮಾದಿಗ ಸಮುದಾಯದ ಹಿತರಕ್ಷಣೆಗಾಗಿ ನೊಂದಾಯಿಸಿ ಅಸ್ತಿತ್ವಕ್ಕೆ ತರಲಾಗಿದೆ. ರಾಜ್ಯ ಸಮಿತಿಯಲ್ಲಿ ಕರ್ನಾಟಕ ಮಾದಾರ ಮಹಾಸಭಾ ರಾಜ್ಯಾಧ್ಯಕ್ಷರಾಗಿ ಸಚಿವ ಕೆ.ಹೆಚ್.ಮುನಿಯಪ್ಪ, ಉಪಾಧ್ಯಕ್ಷರಾಗಿ ಗೋವಿಂದಕಾರಜೋಳ, ಮಾಜಿ ಕೇಂದ್ರ ಸಚಿವ ಎ.ನಾರಾಯಣಸ್ವಾಮಿ, ಪ್ರಧಾನ ಕಾರ್ಯದರ್ಶಿಗಳಾಗಿ ಮಾಜಿ ಹೆಚ್.ಆಂಜನೇಯ, ಆರ್.ಬಿ.ತಿಮ್ಮಾಪೂರ, ಸಂಘಟನಾ ಕಾರ್ಯದರ್ಶಿಗಳಾಗಿ ತಿಮ್ಮರಾಯಪ್ಪ, ಆಲ್ಕೋಡ್ ಹನುಮಂತಪ್ಪ ಸೇರಿದಂತೆ ಎಲ್ಲ ಪಕ್ಷಗಳ ಮಾಜಿ ಶಾಸಕರು, ಹಾಲಿ ಶಾಸಕರು ಮಹಾಸಭಾ ಪದಾಧಿಕಾರಿಗಳಾಗಿದ್ದಾರೆ. ಮಾದಾರ ಮಹಾಸಭಾವು ಯಾವುದೇ ಒಂದು ಪಕ್ಷದ ಮುಖವಾಣಿಯಾಗಿರುವುದಿಲ್ಲ ಎಲ್ಲಾ ಪಕ್ಷಗಳ ಮುಖಂಡರು ಈ ಮಹಾಸಭಾದಲ್ಲಿ ಇದ್ದಾರೆ. ಹಾಗಾಗಿ ಸದಸ್ಯತ್ವಕ್ಕೆ ಸಾಮಾನ್ಯ ಸದಸ್ಯತ್ವ 500ರೂ ಇದ್ದು ಪ್ರತಿಯೊಬ್ಬರೂ ಕಡ್ಡಾಯವಾಗಿ ಸದಸ್ಯತ್ವ ಪಡೆದುಕೊಂಡು ತಮ್ಮ ಅಭಿವೃದ್ಧಿಯ ಜೊತೆಗೆ ಸಮುದಾಯದ ಅಭಿವೃದ್ಧಿಗೆ ಸಹಕಾರ ನೀಡಬೇಕು. ಪ್ರತಿ ತಾಲ್ಲೂಕಿನಿಂದ ಕನಿಷ್ಠ ಎರಡು ಸಾವಿರ ಸದಸ್ಯತ್ವ ಗುರಿ ಹೊಂದಲಾಗಿದೆ. ಮಹಾಸಭಾ ನೂತನ ಜಿಲ್ಲಾಧ್ಯಕ್ಷರಾದ. ಬಿ. ಬಿ.ಕಾವಲು ಕಾಂತರಾಜು, ತಾಲ್ಲೂಕು ಅಧ್ಯಕ್ಷ ಆರ್. ಟಿ.ಉಮೇಶ್ ಮತ್ತು ಪದಾಧಿಕಾರಿಗಳು ಹೆಚ್ಚಿನ ಜವಾಬ್ದಾರಿ ತೆಗೆದುಕೊಂಡು ಸದಸ್ಯತ್ವ ಮಾಡಿಸಿ ಸಮುದಾಯದ ಏಳಿಗೆಗೆ ಮುಂದಾಗಿರುವ ಮಾದಾರ ಮಹಾಸಭಾ ಮಹಾಸಭಾ ವನ್ನು ಗಟ್ಟಿಗೊಳಿಸಬೇಕು. ಈ ಮೂಲಕ ಮಾದಿಗ ಸಮುದಾಯದ ಶೈಕ್ಷಣಿಕ, ಆರ್ಥಿಕ, ರಾಜಕೀಯ ಹಾಗೂ ಸಾಮಾಜಿಕ ಅಭಿವೃದ್ದಿಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಎನ್.ಆರ್.ಚಂದ್ರಶೇಖರ್ ಸಲಹೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಚಾಮನಹಳ್ಳಿ ಮಂಜು, ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ಆರ್.ಕೆ.ಕುಮಾರ್, ಪುರಸಭಾ ಸದಸ್ಯ ಹೆಚ್.ಎಮ್.ಪುಟ್ಟರಾಜು, ನಿವೃತ್ತ ಮುಖ್ಯ ಶಿಕ್ಷಕ ಹೊಸಹೊಳಲು ಮಾಸ್ಟರ್ ಶಿವಣ್ಣ, ತಾಲ್ಲೂಕು ಮಹಾಸಭಾ ಪ್ರಧಾನ ಕಾರ್ಯದರ್ಶಿ ಆರ್.ಕೆ.ಧನಂಜಯ, ಉಪಾಧ್ಯಕ್ಷರಾದ ವಕೀಲ ಎನ್.ಆರ್. ಪ್ರಸನ್ನ ಕುಮಾರ್, ಖಜಾಂಚಿ ಹೆಚ್.ಆರ್.ಪುಟ್ಟರಾಜು, ಪದಾಧಿಕಾರಿಗಳಾದ ತೇಗನಹಳ್ಳಿ ಸುರೇಶ್, ಸೊಸೈಟಿ ಹರೀಶ್, ಜೊತ್ತನಪುರ ಧರ್ಮ, ಬಿ. ಬಿ.ಕಾವಲು ವೀಣಾನಂಜುಂಡಯ್ಯ, ಹರಿಹರಪುರ ರಮೇಶ್, ನಾಗೋನಹಳ್ಳಿ ಸುಧಾಕರ್, ನಾಗರಾಜು, ಗಂಗೇನಹಳ್ಳಿ ಕೃಷ್ಣಯ್ಯ, ಯಡಳ್ಳಿ ಶ್ರೀಧರ್, ಮೂಡನಹಳ್ಳಿ ಮಹಾದೇವ್, ಜಿಲ್ಲಾ ಬಾಬು ಜಗಜೀವರಾಂ ಸಂಘಗಳ ಒಕ್ಕೂಟದ ಉಪಾಧ್ಯಕ್ಷ ರಾಯಸಮುದ್ರ ಗೋಪಿನಾಥ್, ನಂಜಪ್ಪ, ಗೋವಿಂದು, ಮಂಜು, ಹೊನ್ನಪ್ಪ, ಶಿಕ್ಷಕ ಹೆಚ್.ಬಿ.ಬಸವರಾಜು, ಶಿವಕುಮಾರ್, ಮಲ್ಲೋನಹಳ್ಳಿ ಗಂಗಾಧರ್, ಚಟ್ಟಂಗೆರೆ ನಿಂಗರಾಜು ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

## ವಿವೇಕಾನಂದರ ಯುವಶಕ್ತಿಗೆ ದಾರಿದೀಪ: ಆನಂದ್.ಸಿ



**ಬೆಂಗಳೂರು:** ಕರ್ನಾಟಕ ರಾಜ್ಯ ಪುರುಷರ ಕಲ್ಯಾಣ ಮತ್ತು ರಕ್ಷಣಾ ಸಮಿತಿಯ ವತಿಯಿಂದ ಮಹಾನ್ ಯೋಗಿ, ಚಿಂತಕ ಹಾಗೂ ಯುವಶಕ್ತಿಗೆ ದಾರಿದೀಪವಾದ ಸ್ವಾಮಿ ವಿವೇಕಾನಂದರ ಜನ್ಮದಿನದ ಅಂಗವಾಗಿ ರಾಷ್ಟ್ರೀಯ ಯುವಜನ ದಿನಾಚರಣೆಯನ್ನು ಆಚರಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ರಾಜ್ಯ ಪ್ರಶಸ್ತಿ ವಿಜೇತರೂ ಅಧ್ಯಕ್ಷರಾದ ಆನಂದ್ ಸಿ. ತಿರುಮಲ ಮಾತನಾಡಿ, "ಸ್ವಾಮಿ ವಿವೇಕಾನಂದರು ಯುವಜನತೆಗೆ ಆತ್ಮವಿಶ್ವಾಸ, ಧೈರ್ಯ ಮತ್ತು ರಾಷ್ಟ್ರಭಕ್ತಿಯ ಸಂದೇಶ ನೀಡಿದ ಮಹಾನ್ ಚಿಂತಕ. ಅವರ ವಿಚಾರಗಳನ್ನು ಇಂದಿನ ಯುವಜನತೆ ಜೀವನದಲ್ಲಿ ಅಳವಡಿಸಿಕೊಳ್ಳಬೇಕಿದೆ" ಎಂದು ಹೇಳಿದರು.

ಕಾರ್ಯಧ್ಯಕ್ಷ ವಕೀಲರಾದ ಲಯನ್ ಎಲ್. ಶ್ರೀಧರ್ ಮಾತನಾಡಿ ಯುವಕರು ಸಮಾಜದ ಸಮಸ್ಯೆಗಳ ಬಗ್ಗೆ ಜಾಗೃತರಾಗಬೇಕು ಹಾಗೂ ಸಾಮಾಜಿಕ ನ್ಯಾಯಕ್ಕಾಗಿ ಸಂಘಟಿತರಾಗಿ ಕೆಲಸ ಮಾಡಬೇಕೆಂದು ಕರೆ ನೀಡಿದರು.

ಯುವ ಬ್ರಿಗೇಡ್‌ನ ಅಧ್ಯಕ್ಷರಾದ ಎಂ. ಮುನಿಕುಮಾರ್ ಅವರು ಮಾತನಾಡಿ, ಸ್ವಾಮಿ ವಿವೇಕಾನಂದರ ಆದರ್ಶಗಳು ಇಂದಿನ ಯುವಶಕ್ತಿಗೆ ಪ್ರೇರಣೆಯಾಗಿದ್ದು, ರಾಷ್ಟ್ರನಿರ್ಮಾಣದಲ್ಲಿ ಯುವಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಮಿತಿಯ ಮುಖಂಡರಾದ ಸಂಗಮೇಶ್, ಪ್ರಧಾನ ಕಾರ್ಯದರ್ಶಿ ರಂಗನಾಥ್ ಎಲ್ ಪಾತ್ರೋಟಿ, ಗುರುಮೂರ್ತಿ, ನಾಗರಾಜ್ ಪಾಟೀಲ್, ಆರ್ ಜೆ ಪ್ರಿಯಾಂಕಾ, ಆರತಿ, ರುದ್ರೇಶ್, ಹರೀಶ್, ಡೇರಿಕ್, ಹಾಗೂ ಪದಾಧಿಕಾರಿಗಳು, ಯುವಕರು ಉಪಸ್ಥಿತರಿದ್ದರು

## ಶರಾವತಿ ಹಿನ್ನೀರಲ್ಲಿ ಮುಳುಗಿ ಪಶುವೈದ್ಯ ಸಾವು

**ಶಿವಮೊಗ್ಗ:** ಸಾಗರದ ಹಕ್ರೆ ಬಳಿಯ ಶರಾವತಿ ಹಿನ್ನೀರಿನಲ್ಲಿ ಮುಳುಗಿ ಪಶು ವೈದ್ಯರೊಬ್ಬರು ಸಾವನ್ನಪ್ಪಿದ್ದಾರೆ.

ಮೃತರನ್ನು ಸುನೀಲ್ (38) ಎಂದು ಗುರುತಿಸಲಾಗಿದೆ. ಅವರು ಸಾಗರದ ಮಾಸೂರಿನ ಪಶು ಆಸ್ಪತ್ರೆಯಲ್ಲಿ ವೈದ್ಯರಾಗಿ ಕರ್ತವ್ಯ ನಿರ್ವಹಿಸುತ್ತಿದ್ದರು. ಕುಟುಂಬ ಸಮೇತರಾಗಿ ಶರಾವತಿ ಹಿನ್ನೀರಿಗೆ ಪಿಕ್‌ನಿಕ್ ಹೋಗಿದ್ದರು. ಈ ವೇಳೆ ಈಜಲು ನೀರಿಗಿಳಿದಿದ್ದಾಗ ಮುಳುಗಿ ಸಾವನ್ನಪ್ಪಿದ್ದಾರೆ.ಸುನೀಲ್ ನೀರಲ್ಲಿ ಮುಳುಗಿ ನಾಪತ್ತೆಯಾಗುತ್ತಿದ್ದಂತೆ ಕುಟುಂಬಸ್ಥರು ಪೊಲೀಸರಿಗೆ ಮಾಹಿತಿ ನೀಡಿದ್ದರು. ಅಗ್ನಿಶಾಮಕ ಸಿಬ್ಬಂದಿ ಸ್ಥಳಕ್ಕಾಗಮಿಸಿ ನೀರಿನಿಂದ ಶವ ಮೇಲಕ್ಕೆತ್ತಿದ್ದಾರೆ. ಈ ಸಂಬಂಧ ಸಾಗರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸುದ್ದಿ ಹಾಗೂ ಜಾಹೀರಾತುಗಾಳಿಗಾಗಿ ಸಂಪರ್ಕಿಸಿ
9538786812
8217606793
9480867498

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಮಗಳ ಕಣ್ಣೆದುರೇ ತಂದೆಯನ್ನ ಬರ್ಬರವಾಗಿ ಕೊಂದ ದುಷ್ಕರ್ಮಿಗಳು

**ತುಮಕೂರು:** ಅದು ಊರಿನ ಹೊರಗಿರುವ ತೋಟದ ಮನೆ. ಅಪ್ಪ ಅಮ್ಮ ಇಬ್ಬರು ಮಕ್ಕಳು ವಾಸವಾಗಿದ್ದರು. ತಾವಾಯ್ತು ನಮ್ಮ ಬದುಕಾಯ್ತು ಎಂದು ಕುಟುಂಬ ಜೀವನ ನಡೆಸುತ್ತಿತ್ತು. ಹೀಗೆ ನೆಮ್ಮದಿ ಜೀವನ ಮಾಡುತಿದ್ದವರ ಮೇಲೆ ಯಾರ ಕಣ್ಣು ಬಿತ್ತೋ ಗೊತ್ತಿಲ್ಲ. ರಾತ್ರೋರಾತ್ರಿ ದುಷ್ಕರ್ಮಿಗಳ ಗುಂಪೊಂದು ಮನೆ ಯಜಮಾನನ ಮೇಲೆ ದಾಳಿ ಮಾಡಿದೆ. ಮಗಳ ಕಣ್ಣೆದುರೇ ಮಾರಕಾಸ್ತ್ರದ ದಾಳಿಗೆ ತಂದೆ (father) ಬಲಿಯಾಗಿದ್ದಾರೆ (Murder). ಜಿಲ್ಲೆಯ ಚಿಕ್ಕನಾಯಕನಹಳ್ಳಿಯ ಹುಳಿಯಾರು ಹೋಬಳಿಯಲ್ಲಿ ನಡೆದ ಕೃತ್ಯಕ್ಕೆ ಊರಿಗೆ ಊರೇ ಬೆಚ್ಚಿ ಬಿದ್ದಿದೆ.

ತುಮಕೂರು ಜಿಲ್ಲೆಯ ಚಿಕ್ಕನಾಯಕನ ಹಳ್ಳಿಯ ಹುಳಿಯಾರು ಹೋಬಳಿಯ ಕೆಂಕೆರೆ ನಿವಾಸಿ ಮಂಜುನಾಥ್, ದಿನಸಿ ಅಂಗಡಿ ಹಾಗೂ ಟೆಂಟ್ ಹೌಸ್ ನಡೆಸುತ್ತಿದ್ದರು. ಊರಿನ ಹೊರಗಡೆಯ ತೋಟದ ಮನೆಯಲ್ಲಿ ವಾಸವಿದ್ದರು. ತಾನಾಯ್ತು ತಮ್ಮ ಬದುಕಾಯ್ತು ಅಂತ ನೆಮ್ಮದಿ ಜೀವನ ಸಾಗಿಸುತ್ತಿದ್ದರು. ಆದರೆ ನಿನ್ನೆ ತಡರಾತ್ರಿ ಬರ್ಬರವಾಗಿ ಹತ್ಯೆಯಾಗಿದ್ದಾರೆ.

**ನಡೆದದ್ದೇನು?**

ಮಂಜುನಾಥ್ ತನ್ನಿಬ್ಬರು ಮಕ್ಕಳ ಜೊತೆ ಮನೆಯಿಂದ ಹೊರಗೆ ಬಂದಿದ್ದರು. ಟೆಂಟ್ ಹೌಸ್‌ನ ಅಂಗಡಿ ಮುಂದೆ ಮಕ್ಕಳ ಜೊತೆ ಮಾತನಾಡುತ್ತಾ ಕುಳಿತಿದ್ದರಂತೆ ಆದರೆ, ಈ ವೇಳೆ ಪ್ರತ್ಯಕ್ಷರಾದ ನಾಲ್ಕೈದು ಜನರ ಗುಂಪು ಮಂಜುನಾಥ್ ಮೇಲೆ ದಾಳಿಗೆ ಮುಂದಾಗಿದ್ದಾರೆ. ಇದನ್ನು ಕಂಡ ಓರ್ವ ಮಗಳು ಮನೆಯೊಳಗೆ ಓಡಿದರೆ, ಮತ್ತೊಬ್ಬಳನ್ನು ದುಷ್ಕರ್ಮಿ ಹಿಡಿದು ಕಿರುಚಾಡದಂತೆ ಬಾಯಿ ಮುಚ್ಚಿಸಿದ್ದಾರೆ. ಆ ಬಳಿಕ ಚಾಕು ತೆಗೆದ ಹಂತಕರು ಮಂಜುನಾಥ್‌ನ ಎದೆ ಭಾಗ ಸೇರಿದಂತೆ ಹಲವು ಕಡೆ ಇರಿದು ಎಸ್ಕೇಪ್ ಆಗಿದ್ದಾರೆ.

ಇನ್ನು ತಂದೆಯ ಹತ್ಯೆಯ ದೃಶ್ಯ ಕಣ್ಣಾರೆ ಕಂಡ ಮಗಳು ಬೆಚ್ಚಿಬಿದಿದ್ದಾಳೆ. ಬಳಿಕ ಆಕೆ ಮನೆಗೆ ಹೋಗಿ ತಾಯಿಗೆ ವಿಚಾರ ತಿಳಿಸಿದ್ದಾಳೆ. ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ. ಹಂತಕರು ಮುಖಕ್ಕೆ ಮಾಸ್ಕ್ ಹಾಗೂ ಗ್ಲೌಸ್ ತೊಟ್ಟು ಎಂಟ್ರಿ ಕೊಟ್ಟಿದ್ದು, ಯಾರು ಹಾಗೂ ಯಾವ ಕಾರಣಕ್ಕೆ ಕೃತ್ಯವೆಸಗಿದ್ದಾರೆಂದು ಪೊಲೀಸರು ತನಿಖೆ ನಡೆಸಿದ್ದಾರೆ.

ಸದ್ಯ ಘಟನೆ ಸಂಬಂಧ ಹುಳಿಯಾರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮಂಜುನಾಥ್ ಕೊಲೆಗೆ ಕಾರಣ ಏನೆಂಬುದು ಇನ್ನು ಪತ್ತೆಯಾಗಿಲ್ಲ. ಸದ್ಯ ಘಟನಾ ಸ್ಥಳದಲ್ಲಿ ಸಿಕ್ಕಿರುವ ಸಿಸಿಟಿವಿ ಹಾಗೂ ಮಾಹಿತಿಗಳ ಆಧರಿಸಿ ಹುಳಿಯಾರು ಪೊಲೀಸರು ತನಿಖೆ ಆರಂಭಿಸಿದ್ದು, ಆ ಬಳಿಕವಷ್ಟೇ ಮತ್ತಷ್ಟು ಸಂಗತಿಗಳು ತಿಳಿದು ಬರಲಿದೆ.

# ಯುವಕರು ಮಾದಕ ವ್ಯಸನಗಳಿಗೆ ಬಲಿಯಾಗಬೇಡಿ : ಎಸ್. ಮುನಿರಾಜು




**ಪೀಣ್ಯ ದಾಸರಹಳ್ಳಿ:**'ನಮ್ಮ ದೇಶವನ್ನು ಸದೃಢವಾಗಿ ಕಟ್ಟಬೇಕಾದ ಯುವಕರು ಬಲಿಷ್ಠರಾಗಬೇಕಿದೆ. ಆದರ್ಶದ ದಾರಿಯಲ್ಲಿ ಯುವ ಸಮೂಹ ಸಾಗಬೇಕು' ಎಂದು ಶಾಸಕ ಎಸ್. ಮುನಿರಾಜು ಹೇಳಿದರು.

ಚಿಕ್ಕಸಂದ್ರದ ಸಪ್ತಗಿರಿ ವೃತ್ತದಲ್ಲಿ ಭಾರತ ಯುವಕೇಂದ್ರ ವತಿಯಿಂದ ಆಯೋಜಿಸಲಾದ 'ರಾಷ್ಟ್ರೀಯ ಯುವ ದಿನ' ಹಾಗೂ 'ವಿವೇಕ ನಡಿಗೆ ಮಾದಕ ವ್ಯಸನ ಮುಕ್ತ ಸಮಾಜದೆಡೆಗೆ' ಎಂಬ ಶೀರ್ಷಿಕೆಯಡಿ ವಿವೇಕಾನಂದರ ಜಯಂತೋತ್ಸವದಲ್ಲಿ ಮಾತನಾಡಿದರು.

ಇಂದಿನ ಯುವಶಕ್ತಿ ಮಾದಕ ವ್ಯಸನಗಳಿಗೆ ಬಲಿಯಾಗದೆ ವಿವೇಕಾನಂದರ ಆದರ್ಶ ಮತ್ತು ದೇಶಪ್ರೇಮವನ್ನು ಮೈಗೂಡಿಸಿಕೊಳ್ಳಬೇಕಿದೆ' ಎಂದರು. ವಿವೇಕಾನಂದರ ಸಂದೇಶಗಳನ್ನು ಯಾರು ಅರ್ಥೈಸಿಕೊಳ್ಳುತ್ತಾರೋ ಅವರು ಇಂದಲ್ಲಾ ನಾಳೆ ತನ್ನ ಜೀವನದಲ್ಲಿ ಒಳ್ಳೆಯ ಕೆಲಸಗಳನ್ನು ಮಾಡುತ್ತಾರೆ' ಎಂದರು.

ಕಾಲೇಜಿನ ವಿದ್ಯಾರ್ಥಿಗಳು ಸ್ವಾಮಿ ವಿವೇಕಾನಂದರ ಸಂದೇಶಗಳ ನಾಮಫಲಕ ಹಿಡಿದು ಮಾದಕ ವ್ಯಸನಗಳ ವಿರುದ್ಧ ಜಾಗೃತಿ ಮೂಡಿಸಿದರು. ವಿವೇಕಾನಂದರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಸಿಹಿ ಹಂಚಲಾಯಿತು. ವಿವೇಕಾನಂದರ ಭಾವಚಿತ್ರ ಇರುವ ಕೀ ಬಂಚ್, ಫೋಟೋ ಮತ್ತು ವಿವೇಕಾನಂದರ ಕುರಿತ ಪುಸ್ತಕಗಳನ್ನು ವಿತರಿಸ ಲಾಯಿತು.

ದಾಸರಹಳ್ಳಿ ಮಂಡಲ ಅಧ್ಯಕ್ಷ ಸೋಮಶೇಖರ್, ಭಾರತ ಯುವ ಕೇಂದ್ರದ ಅಧ್ಯಕ್ಷ ವಿನೋದ್ ಗೌಡ,ಡಾ. ಸಂಗನಬಸಪ್ಪ ಬಿರಾದಾರ್, ಚಿಕ್ಕಸಂದ್ರದ ಮೋಹನ್, ನವೀನ್, ರಘು ಸೂರ್ಯ, ಪ್ರದೀಪ್, ಶಿವು, ರಘು, ರಮೇಶ್, ಎಂ.ಎಚ್. ಪಾಟೀಲ್,ಎಂ.ಕೆ. ಜಗದೀಶ್, ಸಿದ್ದಲಿಂಗಪ್ಪ, ಬಿಜೆಪಿ ಮಹಿಳಾ ಮುಖಂಡರು, ಕಾರ್ಯಕರ್ತರು, ಸ್ಥಳೀಯರು ಇದ್ದರು.




# ಮೊಮ್ಮಗ ಕಣ್ಣೆದುರೇ ಅಜ್ಜಿಯನ್ನ ಕೊಡಲಿಯಿಂದ ಹತ್ಯೆ



**ಬೆಂಗಳೂರು:**ಹಾಡಹಗಲೇ ನಡೆದ ಭೀಕರ ಕೊಲೆಯೊಂದು ಜನರಲ್ಲಿ ಭಾರೀ ಆತಂಕ ಮೂಡಿಸಿದೆ. ಬೆಂಗಳೂರಿನ ಕುದುರಗೆರೆ ಗ್ರಾಮದಲ್ಲಿ 55 ವರ್ಷದ ಮಹಿಳೆಯನ್ನು ಕೊಡಲಿಯಿಂದ ಕೊಚ್ಚಿ ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ಬೆಳಕಿಗೆ ಬಂದಿದೆ.

ಮೃತ ಮಹಿಳೆಯನ್ನು ದಾಕ್ಷಾಯಿಣಿ (55) ಎಂದು ಗುರುತಿಸಲಾಗಿದೆ. ದಾಕ್ಷಾಯಿಣಿ ಅವರು ಕುದುರಗೆರೆ ಗ್ರಾಮದ ನಿವಾಸಿಯಾಗಿದ್ದು, ಸೋಮವಾರ ಮಧ್ಯಾಹ್ನ ತಮ್ಮ ಮೊಮ್ಮಗನಿಗೆ ಶಾಲೆಯಲ್ಲಿ ಊಟ ಕೊಟ್ಟು ಮನೆಗೆ ಹಿಂತಿರುಗುತ್ತಿದ್ದಾಗ, ದುಷ್ಕರ್ಮಿಗಳು ಬೈಕ್‌ನಲ್ಲಿ ಬಂದು ಏಕಾಏಕಿ ದಾಳಿ ನಡೆಸಿದ್ದಾರೆ ಎನ್ನಲಾಗಿದೆ. ಕೈಯಲ್ಲಿ ಕೊಡಲಿ ಹಿಡಿದು ಬಂದ ದುಷ್ಕರ್ಮಿಗಳು, ದಾಕ್ಷಾಯಿಣಿಯ ಕತ್ತಿಗೆ ಹಾಗೂ ದೇಹದ ವಿವಿಧ ಭಾಗಗಳಿಗೆ ಹೊಡೆದು ಕೊಲೆ ಮಾಡಿ ಪರಾರಿಯಾಗಿದ್ದಾರೆ.



ಈ ಕೊಲೆಯ ಹಿಂದೆ ಸಂಬಂಧಿಯವರ ಕೈವಾಡವಿದೆ ಎಂಬ ಶಂಕೆ ವ್ಯಕ್ತವಾಗಿದೆ. ಮೃತ ದಾಕ್ಷಾಯಿಣಿಯ ಮಾವ ವೀರಭದ್ರ ಎಂಬುವರೊಂದಿಗೆ ಅನೈತಿಕ ಸಂಬಂಧ ಹಾಗೂ ಭೂ ವಿವಾದ ಇತ್ತು ಎನ್ನಲಾಗಿದೆ. ಈ ಹಳೆಯ ವೈಷಮ್ಯವೇ ಕೊಲೆಗೆ ಕಾರಣವಾಗಿರಬಹುದು ಎಂದು ಮೃತ ಮಹಿಳೆಯ ಮಕ್ಕಳು ಆರೋಪಿಸಿದ್ದಾರೆ.

ಘಟನೆಯ ಸುದ್ದಿ ತಿಳಿದ ಕೂಡಲೇ ಮಾದನಾಯಕನಹಳ್ಳಿ ಪೊಲೀಸ್ ಠಾಣೆಯ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದಾರೆ. ವಾಯುವ್ಯ ವಿಭಾಗದ ಡಿಸಿಪಿ ಡಿ.ಎಲ್. ನಾಗೇಶ್ ಅವರು ಫೋರೆನ್ಸಿಕ್ ತಂಡದೊಂದಿಗೆ ಸ್ಥಳಕ್ಕೆ ಭೇಟಿ ನೀಡಿ, ಸಾಕ್ಷ್ಯಾಧಾರಗಳನ್ನು ಸಂಗ್ರಹಿಸಿದ್ದಾರೆ. ಪೊಲೀಸರು ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ವಿಕ್ಟೋರಿಯಾ ಆಸ್ಪತ್ರೆಗೆ ರವಾನೆ ಮಾಡಿದ್ದಾರೆ. ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ಈ ಸಂಬಂಧ ಕೊಲೆ ಪ್ರಕರಣ ದಾಖಲಾಗಿದೆ.

# ಗ್ಯಾರಂಟಿ ಯೋಜನೆಗಳಿಗಾಗಿ 1 ಲಕ್ಷದ 10 ಸಾವಿರ ಕೋಟಿ ರೂ. ಹಣ ವ್ಯಯ: ದಿನೇಶ್ ಗೂಳಿಗೌಡ



**ಚಿತ್ರದುರ್ಗ/ ಹೊಳಲ್ಕೆರೆ:** ಪಂಚ ಗ್ಯಾರಂಟಿ ಯೋಜನೆಗಳಿಗಾಗಿ ರಾಜ್ಯ ಸರ್ಕಾರ ಇದುವರೆಗೂ 1 ಲಕ್ಷದ 10 ಸಾವಿರ ಕೋಟಿ ರೂ. ಹಣವನ್ನು ರಾಜ್ಯ ಸರ್ಕಾರ ವ್ಯಯಿಸಿದೆ. ಹೊಳಲ್ಕೆರೆ ತಾಲೂಕಿಗೆ 293 ಕೋಟಿ ರೂ.ಗೂ ಅಧಿಕ ಹಣವನ್ನು ವೆಚ್ಚ ಮಾಡುವ ಮೂಲಕ ಜನತೆಗೆ ಆರ್ಥಿಕ ಮತ್ತು ಸಾಮಾಜಿಕ ಭದ್ರತೆ ಕಲ್ಪಿಸುವ ಕೆಲಸವನ್ನು ಕಾಂಗ್ರೆಸ್ ಸರ್ಕಾರ ಕೈಗೊಂಡಿದೆ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ರಾಜ್ಯ ಉಪಾಧ್ಯಕ್ಷರಾದ ದಿನೇಶ್ ಗೂಳಿಗೌಡ ಅವರು ಹೇಳಿದರು.

ತಾಲೂಕಿನ ತಾಲೂಕು ಪಂಚಾಯತಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಗ್ಯಾರಂಟಿ ಯೋಜನೆಳಿಗೆ ಹಣ ನೀಡುವುದರ ಜೊತೆಗೆ ಅಭಿವೃದ್ಧಿ ಕಾಮಗಾರಿಗಳಿಗಾಗಿ ಬಜೆಟ್ ನಲ್ಲಿ 1.36 ಲಕ್ಷ ಕೋಟಿ ರೂ.ಹಣವನ್ನು ಮೀಸಲಿಡುವ ಮುಲಕ ಅಭಿವೃದ್ಧಿ ಗ್ಯಾರಂಟಿಯನ್ನು ಸಹ ನೀಡುತ್ತಿದೆ ಎಂದರು.

ಕರ್ನಾಟಕದಲ್ಲಿ ಜಾರಿಗೆ ಬಂದ ಐದು ಗ್ಯಾರಂಟಿ ಯೋಜನೆಗಳು ರಾಜ್ಯಮಟ್ಟಕ್ಕೆ ಸೀಮಿತವಾಗದೆ, ಇಡೀ ದೇಶದ ರಾಜಕೀಯ-ಆಡಳಿತ ಚರ್ಚೆಯ ದಿಕ್ಕನ್ನೇ ಬದಲಿಸಿವೆ. ಬಡತನ ನಿವಾರಣೆ, ಮಹಿಳಾ ಸಬಲೀಕರಣ ಮತ್ತು ಸಾಮಾಜಿಕ ಭದ್ರತೆ ಕುರಿತಂತೆ "ಗ್ಯಾರಂಟಿ ಮಾದರಿ" ರಾಷ್ಟ್ರಮಟ್ಟದಲ್ಲಿ ಹೊಸ ಇತಿಹಾಸ ಬರೆದಿದೆ ಎಂದು ಹೇಳಿದರು.

ಫಲಾನುಭವಿಗಳ ಖಾತೆಗೆ ನೇರವಾಗಿ ಹಣ ಜಮಾ ಮಾಡುವ ಮೂಲಕ ಪಾರದರ್ಶಕತೆ ಕಾಯ್ದುಕೊಳ್ಳಲಾಗಿದೆ. ಗ್ಯಾರಂಟಿ ಯೋಜನೆಗಳು ಜನಕಲ್ಯಾಣದ ಕಲ್ಪನೆಯನ್ನು ಪುನರ್‌ವ್ಯಾಖ್ಯಾನ ಮಾಡಿವೆ. ಬಡವರು, ಮಹಿಳೆಯರು ಮತ್ತು ಯುವಕರನ್ನು ನೇರವಾಗಿ ಕೇಂದ್ರವಾಗಿಟ್ಟುಕೊಂಡ ಈ ಯೋಜನೆಗಳು, ಇತರ ರಾಜ್ಯಗಳು ಮತ್ತು ರಾಷ್ಟ್ರಮಟ್ಟದ ನೀತಿ ರೂಪಿಸುವವರ ಮೇಲೆ ಪ್ರಭಾವ ಬೀರಿದೆ ಎಂದು ಹೇಳಿದರು.

ಗ್ಯಾರಂಟಿ ಯೋಜನೆಗಳು ಜನರ ಬದುಕಿಗೆ ಆಸರೆಯಾಗಿವೆ. ವಿರೋಧಿಸುವವರು ಕೂಡ ಈ ಯೋಜನೆಗಳ ಪ್ರಯೋಜನ ಪಡೆಯುತ್ತಿದ್ದಾರೆ. ಸರ್ಕಾರದ ಈ ಯೋಜನೆಗಳ ಬಗ್ಗೆ ಗ್ರಾಪಂ ಮಟ್ಟದಲ್ಲಿ ಸಾಕಷ್ಟು ಪ್ರಚಾರ ಮಾಡಬೇಕಿದೆ ಎಂದು ಚಿತ್ರದುರ್ಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಶಿವಣ್ಣ ಹೇಳಿದರು. ಸಮಿತಿ ಸದಸ್ಯರು ಕೂಡ ಇದಕ್ಕೆ ದನಿಗೂಡಿಸಿದರು.

ಸಭೆಯಲ್ಲಿ ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಶಿವಪ್ರಕಾಶ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಶಿವಣ್ಣ, ಉಪಾಧ್ಯಕ್ಷ ಮೈಲಾರಪ್ಪ, ತಾಲೂಕು ಅಧ್ಯಕ್ಷ ಹನುಮಂತಪ್ಪ ಹಾಗೂ ಜಿಲ್ಲಾ, ತಾಲೂಕು ಮಟ್ಟದ ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

ಗೃಹಲಕ್ಷ್ಮಿ ಯೋಜನೆಯಡಿ ತಾಲೂಕಿನಲ್ಲಿ 51,393 ಫಲಾನುಭವಿಗಳು ನೋಂದಣಿಯಾಗಿದ್ದು 24 ಕಂತುಗಳ ಹಣ ಬಿಡುಗಡೆ ಆಗಿದೆ. ಇದುವರೆಗೂ 211.22 ಕೋಟಿ ರೂ. ಗೃಹಲಕ್ಷ್ಮಿ ಹಣ ಪಾವತಿಯಾಗಿದ್ದು, 98.14% ಪ್ರಗತಿ ಸಾಧಿಸಲಾಗಿದೆ. ಈ ಯೋಜನೆಯಲ್ಲಿ ನೋಂದಣಿಯಾದವರಲ್ಲಿ 373 ಮಂದಿ ಮೃತಪಟ್ಟಿದ್ದಾರೆ.

ಗೃಹಜ್ಯೋತಿ ಯೋಜನೆಯಡಿ, 45,897 ಕುಟುಂಬಗಳು ಉಚಿತ ವಿದ್ಯುತ್ ಬಳಕೆ ಮಾಡಿದ್ದು ಇದಕ್ಕೆ ತಗುಲಿರುವ 19 ಕೋಟಿ ರೂ. ವೆಚ್ಚದ ಹಣವನ್ನು ಬೆಸ್ಕಾಂಗೆ ಸರ್ಕಾರ ಪಾವತಿಸಿದೆ. ಗೃಹಜ್ಯೋತಿ ಯೋಜನೆಯಡಿ 94.403% ಪ್ರಗತಿ ಸಾಧಿಸಲಾಗಿದೆ. ತಾಲೂಕಿನಲ್ಲಿ 33 ಸಾವಿರ ಕೃಷಿ ಪಂಪ್ ಸೆಟ್ ಗಳಿದ್ದು ಇವುಗಳಿಗೂ ಉಚಿತ ವಿದ್ಯುತ್ ನೀಡುವ ಮೂಲಕ ರೈತರಿಗೂ ನೆರವಾಗಿದೆ.

ಅನ್ನಭಾಗ್ಯ ಯೋಜನೆಯಡಿ 45,222 ಕುಟುಂಬಗಳಿಗೆ ಪ್ರತಿ ತಿಂಗಳು 2800 ಮೆಟ್ರಿಕ್ ಟನ್ ಆಹಾರ ಧಾನ್ಯ ಪೂರೈಕೆ ಮಾಡಲಾಗುತ್ತಿದೆ. ತಾಲೂಕಿನಲ್ಲಿ 600ಕ್ಕೂ ಅಧಿಕ ವಯೋವೃದ್ಧರು ಮತ್ತು ವಿಕಲಚೇತನರಿದ್ದು ಅವರ ಮನೆ ಬಾಗಿಲಿಗೆ ಪಡಿತರ ಪೂರೈಸಲಾಗುತ್ತಿದೆ. ತೂಕದಲ್ಲಿ ವ್ಯತ್ಯಾಸ ಆಗದಂತೆ ಸಕಾಲಕ್ಕೆ ಪಡಿತರ ವಿತರಣೆ ಮಾಡಲಾಗುತ್ತಿದೆ.

ಶಕ್ತಿ ಯೋಜನೆಯಡಿ 1.54 ಕೋಟಿ ಮಹಿಳೆಯರು ಉಚಿತವಾಗಿ ಪ್ರಯಾಣಿಸಿದ್ದು ಇದರ ಮೌಲ್ಯ 59 ಕೋಟಿ ರೂ. ಮೊತ್ತವನ್ನು ರಾಜ್ಯ ಸರ್ಕಾರ ಸಾರಿಗೆ ನಿಗಮಕ್ಕೆ ಪಾವತಿಸಿದೆ.

ಯುವನಿಧಿ ಯೋಜನೆಯಡಿ ತಾಲೂಕಿನಲ್ಲಿ 1089 ಯುವಕ ಯುವತಿಯರು ನೋಂದಣಿಯಾಗಿದ್ದಾರೆ. 1065 ಪದವಿ, 24 ಡಿಪ್ಲೋಮಾದಾರರಿದ್ದಾರೆ. ಇದುವರೆಗೆ ಪದವಿದರರಿಗೆ 3.36 ಕೋಟಿ ರೂ. ಡಿಪ್ಲೋಮಾದಾರರಿಗೆ 3.51 ಲಕ್ಷ ರೂ. ಸೇರಿದಂತೆ ಒಟ್ಟು 3.07 ಕೋಟಿ ರೂ.ಹಣವನ್ನು ಪದವೀಧರ ಯುವಕ ಯುವತಿಯರಿಗೆ ನಿರುದ್ಯೋಗ ಭತ್ಯೆ ನೀಡಲಾಗಿದೆ.

**ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ ಅವರನ್ನು ನೆನೆಯಬೇಕು**

ಗೃಹಲಕ್ಷ್ಮಿ ಹಣದಿಂದ ಕುಟುಂಬದ ಆರ್ಥಿಕ ಪರಿಸ್ಥಿತಿ ಸರಿದೂಗಿಸಲು ಸಹಕಾರಿಯಾಗಿದೆ. ಇದುವರೆಗೆ ಬಂದಂತಹ ಹಣದಿಂದ ಹೊಲಿಗೆ ಯಂತ್ರ ಖರೀದಿಸಿ ಬಟ್ಟೆ ಹೊಲೆದು ಜೀವನ ನಿರ್ವಹಿಸಲು ಅನುಕೂಲವಾಗಿದೆ. ಇದರ ಜೊತೆಗೆ ಮಕ್ಕಳ ಶಾಲಾ ಶುಲ್ಕ ಕಟ್ಟಲು, ಪಠ್ಯ ಸಾಮಾಗ್ರಿ ಖರೀದಿಗೆ ಉಪಯುಕ್ತವಾಗಿದೆ ಎಂದು ಹೊಳಲ್ಕೆರೆ ತಾಲೂಕು ಮಲ್ಲಾಡಿಹಳ್ಳಿ ಗ್ರಾಮದ ಅನಿತಾ ತಮ್ಮ ಅನಿಸಿಕೆ ಹಂಚಿಕೊಂಡರು.

ಗುಂಡೇರಿ ಗ್ರಾಮದ ಮಾಲಾ ಎಂಬ ಫಲಾನುಭವಿ ಗ್ಯಾರಂಟಿ ಯೋಜನೆಗಳ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದರು. ಉಳ್ಳವರಿಗೆ ಗ್ಯಾರಂಟಿ ಬೇಡದಿರಬಹುದು ಆದರೆ ಇಲ್ಲದವರಿಗೆ ಬದುಕು ಕಟ್ಟಿಕೊಳ್ಳಲು ಗ್ಯಾರಂಟಿ ಯೋಜನೆಗಳು ಅನುಕೂಲವಾಗಿದೆ. ಶಕ್ತಿ ಯೋಜನೆಯ ಉಚಿತ ಬಸ್ ಸೇವೆ ಕೆಲಸಕ್ಕೆ ಹೋಗುವವರಿಗೆ ಉಪಯೋಗವಾಗಿದ್ದರೆ, ಗೃಹಲಕ್ಷ್ಮಿ ಹಣದಿಂದ ಔಷಧಿ ಖರೀದಿಗೆ ಸಹಾಯವಾಗಿದೆ. ಯಾವುದೇ ಕಾರಣಕ್ಕೂ ಈ ಯೋಜನೆ ನಿಲ್ಲಬಾರದು. ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ ಅವರನ್ನು ನಾವು ನೆನೆಯಬೇಕು ಎಂದು ಹೇಳಿದರು.

**ಗ್ರಾ.ಪಂ ಗಳಲ್ಲಿ ಪ್ರಚಾರ**: ಹೊಳಲ್ಕೆರೆ ತಾಲೂಕಿನ 29 ಗ್ರಾಮ ಪಂಚಾಯತಿಗಳಲ್ಲಿ ಗ್ಯಾರಂಟಿ ಯೋಜನೆಗಳ ಕುರಿತು ವ್ಯಾಪಕ ಪ್ರಚಾರ ಕಾರ್ಯಕೈಗೊಳ್ಳಬೇಕು ಎಂದು ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗೆ ದಿನೇಶ್ ಗೂಳಿಗೌಡ ಅವರು ಸೂಚನೆ ನೀಡಿದರು. ಫಲಾನುಭವಿಗಳ ಸಂಖ್ಯೆ, ಸರ್ಕಾರ ಬಿಡುಗಡೆ ಮಾಡಿರುವ ಅನುದಾನದ ಸಂಪೂರ್ಣ ಅಂಕಿಸಂಖ್ಯೆಗಳನ್ನು ಒಳಗೊಂಡ ಫ್ಲೆಕ್ಸ್ ಗಳನ್ನು ಅಳವಡಿಸಬೇಕೆಂದು ಸೂಚಿಸಿದರು.




# ಜನವರಿ 14 ರಂದು ಸದ್ಗುರು ಸಾನ್ನಿಧ್ಯದಲ್ಲಿ ಮಕರ ಸಂಕ್ರಾಂತಿ ಸಂಭ್ರಮ

**ಬೆಂಗಳೂರು:** ಸದ್ಗುರುಗಳಿಂದ ಪ್ರತಿಷ್ಠಾಪಿಸಲಾಗಿರುವ ಪವಿತ್ರ ಸ್ಥಳವಾದ ಸದ್ಗುರು ಸನ್ನಿಧಿಯು ಜನವರಿ 14, 2026 ಬುಧವಾರದಂದು ದಿನವಿಡೀ ಮಕರ ಸಂಕ್ರಾಂತಿ ಆಚರಣೆಗಳೊಂದಿಗೆ ಚೈತನ್ಯಭರಿತವಾಗಿರಲಿದೆ. ಸಂಜೆ 5 ರಿಂದ 6 ರವರೆಗೆ ಸದ್ಗುರುಗಳ ಸಾನ್ನಿಧ್ಯದಲ್ಲಿ ಭವ್ಯ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ಸಂಜೆ 7 ಗಂಟೆಗೆ ವಿಶೇಷ ಸಾಂಸ್ಕೃತಿಕ ಪ್ರದರ್ಶನ ನಡೆಯಲಿದೆ.



ಮಕರ ಸಂಕ್ರಾಂತಿಯು ಸೂರ್ಯನ ಉತ್ತರಾಭಿಮುಖ ಪಯಣವನ್ನು ಸೂಚಿಸುತ್ತದೆ ಮತ್ತು ಇದನ್ನು ಸಾಂಪ್ರದಾಯಿಕವಾಗಿ ಪ್ರಕೃತಿಯ ಕೊಡುಗೆ ಹಾಗೂ ರೈತರ ಶ್ರಮವನ್ನು ಗೌರವಿಸುವ ಸಮಯವಾಗಿ ಆಚರಿಸಲಾಗುತ್ತದೆ. ಹಬ್ಬದ ಸಾರವನ್ನು ಸದ್ಗುರುಗಳು ಈ ರೀತಿಯಾಗಿ ವಿವರಿಸುತ್ತಾರೆ, "ಮಕರ ಸಂಕ್ರಾಂತಿಯು ವಸಂತಕಾಲದೆಡೆಗೆ ಭೂಮಿತಾಯಿಯ ಮೊದಲ ಹೆಜ್ಜೆಯನ್ನು ಸೂಚಿಸುತ್ತದೆ." ಸದ್ಗುರು ಸನ್ನಿಧಿ ಬೆಂಗಳೂರಿನಲ್ಲಿ ಈ ಹಬ್ಬವನ್ನು ಸದ್ಗುರುಗಳ ಸಾನ್ನಿಧ್ಯದಲ್ಲಿ ಕೃತಜ್ಞತೆ, ಭಕ್ತಿ, ಸಂಸ್ಕೃತಿ ಮತ್ತು ಜನರ ಭಾಗವಹಿಸುವಿಕೆಯೊಂದಿಗೆ ಪೂರ್ಣ ದಿನದ ಸಂಭ್ರಮಾಚರಣೆಯಾಗಿ ಆಚರಿಸಲಾಗುವುದು.

ಸಂಜೆಯ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಸದ್ಗುರುಗಳು, ಪ್ರಕೃತಿಯ ಶಕ್ತಿ ಮತ್ತು ಜೀವಶಕ್ತಿಗಳಿಗೆ ಕೃತಜ್ಞತೆ ಸಲ್ಲಿಸುವ ಪ್ರಜ್ಞಾಪೂರ್ವಕ ಅಭಿವ್ಯಕ್ತಿಯಾಗಿ ಸಂಕ್ರಾಂತಿಯನ್ನು ಹೇಗೆ ಆಚರಿಸಬೇಕು ಎಂಬುದರ ಕುರಿತು ಭಕ್ತರಿಗೆ ಮಾರ್ಗದರ್ಶನ ನೀಡಲಿದ್ದಾರೆ. ಈ ಕಾರ್ಯಕ್ರಮವು ಧ್ವನಿ, ಬೆಳಕು ಮತ್ತು ಭಕ್ತಿಪೂರ್ವಕ 14 ನಿಮಿಷಗಳ ಅದ್ಭುತ ದೃಶ್ಯ ವೈಭವವಾದ 'ಆದಿಯೋಗಿ ದಿವ್ಯ ದರ್ಶನ' ದೊಂದಿಗೆ ಮುಕ್ತಾಯಗೊಳ್ಳಲಿದೆ. ಆಚರಣೆಯ ಭಾಗವಾಗಿ ಸದ್ಗುರು ಸನ್ನಿಧಿಯಲ್ಲಿ ವೈಭವಪೂರ್ಣ ಜಾತ್ರೆ ನಡೆಯಲಿದ್ದು, ಇದು ಕರ್ನಾಟಕದ ಸಾಂಪ್ರದಾಯಿಕ ಜಾತ್ರೆಗಳ ಬಣ್ಣ, ರುಚಿ ಮತ್ತು ಸಮುದಾಯ ಚೈತನ್ಯಕ್ಕೆ ಜೀವ ತುಂಬಲಿದೆ. ಸಂಕ್ರಾಂತಿಯ ಸಂಭ್ರಮದ ಜೊತೆಗೆ ನಡೆಯುವ ಜಾತ್ರೆಯು ಆಗಮಿಸುವ ಕುಟುಂಬಗಳು ಮತ್ತು ಸಂದರ್ಶಕರಿಗೆ ಈ ಪವಿತ್ರ ಆವರಣದಲ್ಲಿ ಗ್ರಾಮೀಣ ಹಬ್ಬದ ಪರಿಸರವನ್ನು ಅನುಭವಿಸುವ ಅವಕಾಶವನ್ನು ನೀಡುತ್ತದೆ.

ಸಾಂಪ್ರದಾಯಿಕ ಕರಕುಶಲ ವಸ್ತುಗಳು, ಕೈಮಗ್ಗದ ಬಟ್ಟೆಗಳು ಮತ್ತು ಮನೆಯಲ್ಲಿ ತಯಾರಿಸಿದ ಉತ್ಪನ್ನಗಳ ಮಳಿಗೆಗಳನ್ನು ಸಂದರ್ಶಕರು ವೀಕ್ಷಿಸಬಹುದು. ಇದು ಗ್ರಾಮೀಣ ಕುಶಲಕರ್ಮಿಗಳಿಗೆ ಮತ್ತು ಸಣ್ಣ ಉತ್ಪಾದಕರಿಗೆ ಒಂದು ವೇದಿಕೆಯನ್ನು ಒದಗಿಸುತ್ತದೆ. ಈ ಜಾತ್ರೆಯಲ್ಲಿ ಮಕ್ಕಳಿಗಾಗಿ ಮೋಜಿನ ಆಟಗಳು ಮತ್ತು ಚಟುವಟಿಕೆಗಳೂ ಇರಲಿದ್ದು, ಬೆಂಗಳೂರು ಹಾಗೂ ಇತರ ಸ್ಥಳಗಳಿಂದ ಬರುವವರಿಗೆ ಒಂದು ಪರಿಪೂರ್ಣವಾದ ಪ್ರವಾಸವಾಗಲಿದೆ.

ಸಂಭ್ರಮಾಚರಣೆಯು ರಾಜ್ಯದ ವಿವಿಧ ಕಲಾವಿದರಿಂದ ಜಾನಪದ ಪ್ರದರ್ಶನಗಳ ಮೂಲಕ ಕರ್ನಾಟಕದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಪ್ರದರ್ಶಿಸಲಿದ್ದು, ಇದರಲ್ಲಿ ಡೊಳ್ಳು ಕುಣಿತದಂತಹ ವೈಭವಯುತ ಸಾಂಪ್ರದಾಯಿಕ ನೃತ್ಯ ಪ್ರಕಾರಗಳೂ ಸೇರಿವೆ. 'ಸೌಂಡ್ಸ್ ಆಫ್ ಈಶ' ಸಂಗೀತ ತಂಡವು ಭಕ್ತಿ ಮತ್ತು ಆಂತರಿಕ ನಿಶ್ಚಲತೆಯ ವಾತಾವರಣವನ್ನು ಸೃಷ್ಟಿಸುವ ಸುಮಧುರ ಸಂಗೀತದ ಲಹರಿಯನ್ನು ಅರ್ಪಿಸಲಿದೆ.

ಇದರೊಂದಿಗೆ, 'ಸದ್ಗುರು ಗುರುಕುಲಂ'ನ ಈಶ ಸಂಸ್ಕೃತಿ ತಂಡವು ಸಾಂಪ್ರದಾಯಿಕ ಕಲೆ ಮತ್ತು ಸಾಂಸ್ಕೃತಿಕ ಪ್ರದರ್ಶನಗಳನ್ನು ಪ್ರಸ್ತುತಪಡಿಸಲಿದ್ದು, ನಗರವಾಸಿಗಳಿಗೂ ಅರ್ಥವಾಗುವಂತೆ ಶಾಸ್ತ್ರೀಯ ಮತ್ತು ಜಾನಪದ ಪ್ರಕಾರಗಳಿಗೆ ಜೀವ ತುಂಬಲಿದೆ. ಒಟ್ಟಾರೆಯಾಗಿ, ಈ ಪ್ರದರ್ಶನಗಳನ್ನು ಕೇವಲ ಮನರಂಜನೆಯಾಗಿ ಮಾತ್ರವಲ್ಲದೆ, ಪ್ರೇಕ್ಷಕರಿಗೆ ತಮ್ಮ ಸಾಂಸ್ಕೃತಿಕ ಮೂಲದೊಂದಿಗೆ ಮರುಸಂಪರ್ಕ ಸಾಧಿಸಲು ಒಂದು ಮಾರ್ಗವಾಗಿ ರೂಪಿಸಲಾಗಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.